ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ 69/2024**

ಪ್ರ.ವ.ಬೋ.ತಾಃ 03-12-2025

ಚಾಸಾಃ 5 ಪ್ರಾಸಾಃ 6

| | |
|---|---|
| ಸಾಕ್ಷಿಯ ಹೆಸರು | ನಾಗರಾಜು |
| ತಂದೆ/ಗಂಡನ ಹೆಸರು | ದಾಸಪ್ಪ |
| ವಯಸ್ಸು | 40 ವರ್ಷ |
| ವೃತ್ತಿ | ಕೂಲಿ ಕೆಲಸ |
| ವಾಸ | ಲಕ್ಲೀಹಟ್ಟಿ, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ಈಗ ತೋರುತ್ತಿರುವ ಸ್ಥಳ ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.11 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.11(ಸಿ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಒಂದು ಫೋಟೋವನ್ನು ತೆಗೆದರು. ಆ ಫೋಟೋವನ್ನು ನಿಪಿ.12 ಎಂದು ಈಗಾಗಲೇ ಗುರುತಿಸಲಾಗಿದೆ. ಈಗ ತೋರುತ್ತಿರುವ ಅಮಾನತ್ತು ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.15 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.15(ಸಿ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಈಗ ತೋರುತ್ತಿರುವ ಎರಡು ಫೋಟೋಗಳಲ್ಲಿರುವ ವ್ಯಕ್ತಿ ನಾನೇ

ಆಗಿರುತ್ತೇನೆ. ಅವುಗಳನ್ನು ನಿಪಿ.13 ಮತ್ತು 14 ಎಂದು ಈಗಾಗಲೇ ಗುರುತಿಸಲಾಗಿದೆ. ಆ ಫೋಟೋಗಳನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂಬುದು ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಪೊಲೀಸರು ನನ್ನ ಸಮಕ್ಷಮ ಯಾವುದೇ ವಾಹಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ– ಮಾನ್ಯ ಸ.ಸ.ಅ. ರವರಿಂದಃ–**

ದಿಃ 19.07.2024 ರಂದು ಪೊಲೀಸರು ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿ ಚಾಸಾ.3 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ.4 ರವರ ಸಮಕ್ಷಮ ಮಧ್ಯಾಹ್ನ 2.00 ರಿಂದ 3.00 ಗಂಟೆ ಸಮಯದಲ್ಲಿ ಸ್ಥಳ ಪಂಚನಾಮೆ ಮಾಡಿ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ.12 ರಂತಹ ಫೋಟೋ ತೆಗೆದರು ಎಂದರೆ ಸರಿಯಲ್ಲ. ಅದೇ ದಿನ ಮಧ್ಯಾಹ್ನ 3.30 ರಿಂದ 4.30 ಗಂಟೆವರೆಗೆ ಮಿಡಿಗೇಶಿ ಪೊಲೀಸ್ ಠಾಣಾ ಆವರಣದಲ್ಲಿ ಚಾಸಾ.3 ರವರು ತೋರಿಸಿದ ಅಪಘಾತಕ್ಕೊಳಗಾದ ಕೆಎ–06–ಎಟಿ–5721 ಬುಲೇರೋ ಪಿಕಪ್ ವಾಹನ ಹಾಗೂ ಕೆಎ–64–ಕೆ–1699 ದ್ವಿಚಕ್ರ ವಾನಗಳನ್ನು ನನ್ನ ಹಾಗೂ ಚಾಸಾ4 ರವರ ಸಮಕ್ಷಮ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ.13 ಮತ್ತು 14 ರಂತಹ ಫೋಟೋ ತೆಗೆದರು

ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿತರ ಪರವಾಗಿ ಶ್ರೀ. ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ